ಸಂ: DHT-DDHLOWSP(KHTS)/1/2024 ದಿನಾಂಕ: 24-04-2024

## ಪತ್ರಿಕಾ ಪ್ರಕಟಣೆ

**ವಿಷಯ:-** 2024-25 ನೇ ಸಾಲಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 3 ವರ್ಷಗಳ ಡಿಪ್ಲೋಮಾ ಕೋರ್ಸಗೆ ಅರ್ಜಿಗಳ ಆಹ್ವಾನ.

*******

2024-25 ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ ಕಲಿಕೆಗಾಗಿ 44 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500/- ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು.

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಿನಾಂಕ: 01-07-2024 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಡೀಕೃತ ಅಂಕಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ.

**ಮೇಲ್ಕಂಡ ಡಿಪ್ಲೋಮಾ ಕೋರ್ಸಗಾಗಿ ಲಭ್ಯವಿರುವ ಸಂಸ್ಥೆಗಳ ವಿವರ:**

| | | |
|---|---|---|
| 1. ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ-ಬೆಟಗೇರಿ (ಕರ್ನಾಟಕ) | - | 22 ಅಭ್ಯರ್ಥಿಗಳು |
| 2. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) | - | 17 ಅಭ್ಯರ್ಥಿಗಳು |
| 3. ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) | - | 03 ಅಭ್ಯರ್ಥಿಗಳು |
| 4. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) | - | 02 ಅಭ್ಯರ್ಥಿಗಳು |
| | | **ಒಟ್ಟು 44 ಅಭ್ಯರ್ಥಿಗಳು** |

ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಮತ್ತು ಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ ದೂರವಾಣಿ ಸಂ: 08372-297221 ಮೊಬೈಲ್ ಸಂಖ್ಯೆ: 9449162822 ಅಥವಾ ಆಯಾ ಜಿಲ್ಲೆಯ ಜಂಟಿ/ಉಪ/ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಇವರುಗಳನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

**ಅರ್ಜಿಗಳನ್ನು ಆನಲೈನ್‌ನಲ್ಲಿ ಡೌನಲೋಡ್ ಮಾಡಿಕೊಳ್ಳಲು ಲಿಂಕ್**

**https://khtigadag.ac.in/AdmissionForm.pdf**

ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ **"ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ-ಬೆಟಗೇರಿ-582102"** ಇವರಿಗೆ ಸಲ್ಲಿಸಲು ಕೊನೆಯ ದಿನಾಂಕ: 31-05-2024.

24/4

ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ
ನಿರ್ದೇಶಕರು, ಕೈಮಗ್ಗ ಮತ್ತು ಜವಳಿ

No: DHT-DDHLOWSP(KHTS)/1/2024 Date : 24-04-2024

## ***PRESS NOTIFICATION***

Sub:- Inviting applications for 3 year Diploma course in Handloom and Textile Technology for 2024-25.

*******

Applications are invited for 3 year Diploma (DHTT) course in Handloom and Textile Technology for the academic year 2024-25 from the eligible candidates in the following institutes.

The eligibility for submission of application is pass in SSLC or equivalent examination with English as subject of study. Aggregate of marks obtained in the qualifying examination shall be the basis for determination of merit.

As per the guidelines the students will be paid a monthly stipend of Rs.2,500/- during the course of study. Hostel facilities are made available for boys on payment

Age limit for admission is between 15 to 23 years for general candidates and 15 to 25 for SC/ST candidates as on 01-07-2024. A Total of 44 candidates will be selected to study the above course in the following institutions.

| | |
|---|---|
| 1) Karnataka Handloom Technology Institute, Gadag (Karnataka) | 22 candidates |
| 2) Indian Institute of Handloom Technology, Salem (Tamil Nadu) | 17 candidates |
| 3) S.P.K.M. Indian Institute of Handloom Technology, Venkatageri. (Andhra Pradesh) | 03 candidates |
| 4) Indian Institute of Handloom Technology , Kannur, (Kerala) | 02 candidates |
| **Total...........** | **44 candidates** |

Merit candidates shall be called for admission through counseling.

Interested candidates may collect the application forms free of cost from the Principal, Karnataka Handloom Technology Institute Narsapur, Gadag-Betageri–582102 Ph: 08372-297221 Mobile No: 9449162822 or from the Joint Director/Deputy Director /Assistant Director, Handloom and Textiles Department of respective Districts.

**Online application download link**

**https://khtigadag.ac.in/AdmissionForm.pdf**

Completely filled applications with documents are required to be sent to "**The Principal, Karnataka Handloom Technology Institute, Narasapur, Gadag-Betageri – 582102**". The last date for receipt of applications is: 31-05-2024.

24/4.

Commissioner for Textile Development and Director of Handlooms and Textiles,